| ಕ್ರಮ ಸಂಖ್ಯೆ | ನಗರಾಭಿವೃದ್ಧಿ ಪ್ರಾಧಿಕಾರಗಳ ಸಂಖ್ಯೆ | ಬಾಕಿ ಇರುವ ವಾರ್ಷಿಕ ವರದಿಗಳು | ಬಾಕಿ ಇರುವ ಲೆಕ್ಕ ಪರಿಶೋಧನಾ ವರದಿಗಳು |
|---|---|---|---|
| | | 1989-90 | - |
| | | 1990-91 | - |
| .4) | ಮೈಸೂರು | - | 1994-95 |
| 5) | ಬಾಗಲಕೋಟೆ | 1994-95 | 1994-95 |

**ಬೆಂಗಳೂರಿನ ವಿಧಾನ ಸೌಧದ ಮುಂದೆ ಬಾಬು ಜಗಜೀವನರಾಂರವರ ಪ್ರತಿಮೆ ಸ್ಥಾಪನೆ.**

512 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ಬೆಂಗಳೂರಿನ ವಿಧಾನಸೌಧದ ಮುಂದೆ ಶ್ರೀ ಬಾಬು ಜಗಜೀವನರಾಂರವರ ಪ್ರತಿಮೆಯನ್ನು ಸ್ಥಾಪಿಸಲು ಸರ್ಕಾರ ನಿರ್ಧರಿಸಿದೆಯೇ?*

*ಆ) ಹಾಗಿದ್ದಲ್ಲಿ ಇದಕ್ಕಾಗಿ ಸ್ಥಳವನ್ನು ನಿಗಧಿ ಪಡಿಸಲಾಗಿದೆಯೇ?*

*ಇ) ಇದಕ್ಕಾಗಿ ತಗಲುವ ಅಂದಾಜುವೆಚ್ಚವೆಷ್ಟು?*

ಶ್ರೀ ರಮೇಶ್ ಸಿ. ಜಿಗಜಿಣಗಿ (ಸಮಾಜ ಕಲ್ಯಾಣ ಸಚಿವರು) :

ಅ) ವಿಧಾನ ಸೌಧದ ಮುಂದೆಯೇ ಸ್ಥಾಪನೆ ಮಾಡಬೇಕೆಂದು ಹಲವಾರು ಸಂಘಸಂಸ್ಥೆಗಳು ಒತ್ತಾಯ ಮಾಡುತ್ತಿರುವುದರಿಂದ ಈ ಪ್ರಸ್ತಾವನೆ ಸದ್ಯಕ್ಕೆ ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಪ್ರತಿಮೆ ಕೆಲಸ ಮುಗಿದಿದೆ. ಪ್ರತಿಮೆಯನ್ನು ಆದಷ್ಟು ಬೇಗನೆ ಸ್ಥಾಪಿಸಲಾಗುವುದು.

ಈ) ಪ್ರತಿಮೆ ರೂ. 7.45.00 (ಏಳು ಲಕ್ಷದ ನಲ್ವತ್ತೈದು ಸಾವಿರ ರೂಪಾಯಿಗಳು ಮಾತ್ರ) ವೆಚ್ಚವಾಗಿದೆ. ಪ್ರತಿಮೆಯನ್ನು ಸ್ಥಾಪಿಸಲು ಗ್ರಾನೈಟ್ ಕಲ್ಲಿನಿಂದ ಪ್ಲಾಟಫಾರಂ ನಿರ್ಮಿಸಲು ತಗಲಬಹುದಾಗ ಅಂದಾಜುಪಟ್ಟಿಯನ್ನು ರವಾನಿಸಲು ಕಾರ್ಯಪಾಲಕ ಅಭಿಯಂತರರು, ನಂ.1, ಕಟ್ಟಡಗಳ ವಿಭಾಗ, ಬೆಂಗಳೂರು ಇವರನ್ನು ಕೋರಲಾಗಿದೆ.

**ಬೆಂಗಳೂರಿನಲ್ಲಿರುವ ಕೈಮಗ್ಗ ಅಭಿವೃದ್ಧಿ ನಿಗಮದ ಕಛೇರಿಯನ್ನು ಹುಬ್ಬಳ್ಳಿಗೆ ವರ್ಗಾವಣೆ**

513 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಸಕ್ಕರೆ ಜವಳಿ ವಿಜ್ಞಾನ ಮತ್ತು ತಂತ್ರಜ್ಞಾನ ಜೀವಿಶಾಸ್ತ್ರ ಮತ್ತು ಪರಿಸರ ರಾಜ್ಯ ಸಚಿವರು ಈಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) *ಬೆಂಗಳೂರಿನಲ್ಲಿರುವ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದಲ್ಲಿ ಪ್ರಧಾನ ಕಛೇರಿಯಲ್ಲಿ ಕೆಲಸ ಮಾಡುತ್ತಿರುವ ನೌಕರರ ಸಂಖ್ಯೆ ಎಷ್ಟು?*

2) *ಈ ಕಛೇರಿಯನ್ನು ಹುಬ್ಬಳ್ಳಿಗೆ ಸ್ಥಳಾಂತರಿಸಲು ಸರ್ಕಾರ ನಿರ್ಧರಿಸಿದೆಯೇ?*

3) *ಹಾಗಿದ್ದಲ್ಲಿ ಅದಕ್ಕೆ ಕಾರಣಗಳೇನು?*

4) *ನೌಕರರುಗಳಿಗೆ ಹುಬ್ಬಳ್ಳಿಯಲ್ಲಿ ಮನೆದೊರಕುವುದು ಕಷ್ಟವೆಂಬದು ಸರ್ಕಾರದ ಗಮನಕ್ಕೆ ಬಂದಿದೆಯೇ?*

5) *ಈ ಕಛೇರಿಯನ್ನು ಸ್ಥಳಾಂತರಿಸುವುದಕ್ಕೆ ಮುಂದೆ ಎಲ್ಲಾ ನೌಕರರುಗಳಿಗೆ ಮನೆಗಳನ್ನು ಒದಗಿಸಲು ಸರ್ಕಾರ ಕ್ರಮಕೈಗೊಳ್ಳುವುದೇ?*

ಶ್ರೀ ಪಿ.ಸಿ. ಸಿದ್ದನಗೌಡರ್ (ಸಕ್ಕರೆ ಜವಳಿ, ವಿಜ್ಞಾನ ಮತ್ತು ತಂತ್ರಜ್ಞಾನ ಜೀವಿಶಾಸ್ತ್ರ ಮತ್ತು ಪರಿಸರ ರಾಜ್ಯ ಸಚಿವರು) :

1) 201.

2) ಸರ್ಕಾರದ ಆದೇಶ ಸಂ:ಸಿಐ:233: ಸಿಟಿಹೆಚ್: ದಿ: 11-9-95ರಲ್ಲಿ ಸ್ಥಳಾಂತರಿಸಲು ತತ್ವಶಃ ಒಪ್ಪಿಗೆ ನೀಡಿದೆ.

3) ಕೈಮಗ್ಗ ಅಭಿವೃದ್ಧಿ ನಿಗಮದ ಅಧೀನದಲ್ಲಿ ಕೆಲಸ ಮಾಡುತ್ತಿರುವ ಕೈಮಗ್ಗ ನೇಕಾರರಲ್ಲಿ ಹೆಚ್ಚಿನ ಸಂಖ್ಯೆಯ ಕೈಮಗ್ಗ ನೇಕಾರರು ಉತ್ತರ ಕರ್ನಾಟಕದಲ್ಲಿ ಇದ್ದಾರೆ. ನಿಗಮದ ಅಧೀನದಲ್ಲಿ ಕೈಮಗ್ಗ ಕ್ಷೇತ್ರದಲ್ಲಿ ಹೆಚ್ಚಿನ ಪಾಲಿನ ಉತ್ಪಾದನೆ ಉತ್ತರ ಕರ್ನಾಟಕದಲ್ಲಿ ನಡೆಯುತ್ತಿದೆ. ನೇಕಾರರ ವೃತ್ತಿ ಕೌಶ್ಯಲ್ಯವನ್ನು ಹೆಚ್ಚಿಸುವಂತಹ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ನೇಕಾರರಿಗೆ ಸಾಕಷ್ಟು ಪ್ರಮಾಣದಲ್ಲಿ ನೂಲು ಸರಬರಾಜು ಮಾಡಲು ಅಳವಡಿಸಿಕೊಂಡಿರುವ ಯೋಜನೆಗಳನ್ನು ಸುಗಮನವಾಗಿ ಅನುಷ್ಠಾನಗೊಳಿಸಲು ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಕೇಂದ್ರ ಕಛೇರಿಯನ್ನು ಹುಬ್ಬಳ್ಳಿಗೆ ಸ್ಥಳಾಂತರಿಸಲು ನಿರ್ದೇಶಿಸಲಾಗಿದೆ.

4) ಮತ್ತು 5) ಈ.ಬಗ್ಗೆ ಪರಿಶೀಲಿಸಿ ಮುಂದೆ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

**ಕರ್ನಾಟಕ ಸಾಬೂನು ಕಾರ್ಖಾನೆಯನ್ನು ಖಾಸಗೀಕರಣಗೊಳಿಸುವುದರ ಬಗ್ಗೆ**

514 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕರ್ನಾಟಕ ಸಾಬೂನು ಕಾರ್ಖಾನೆಯನ್ನು (ಕೆಎಸಡಿಎಲ್) ಖಾಸಗಿ ಆಡಳಿತ ಮಂಡಳಿಗೆ ಒಪ್ಪಿಸಲು ಸರ್ಕಾರ ತೀರ್ಮಾನಿಸಿದೆಯೇ?*

ಆ) *ಹಾಗಿದ್ದಲ್ಲಿ, ಆ ಖಾಸಗೀ ಆಡಳಿತ ಮಂಡಲಿಯ ಹೆಸರೇನು ಹಾಗೂ ಅದರ ನಿರ್ದೇಶಕರುಗಳ ವಿವರ ನೀಡುವುದು?*